# ಕರ್ನಾಟಕ ವಿಧಾನ ಪರಿಷತ್

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:** 836
**ಸದಸ್ಯರ ಹೆಸರು** : ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ (ವಿಧಾನ ಸಭೆಯಿಂದ ಚುನಾಯಿತರಾದವರು)
**ಉತ್ತರಿಸುವ ದಿನಾಂಕ** : 26.12.2022
**ಉತ್ತರಿಸುವ ಸಚಿವರು** : ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಸರ್ಕಾರಿ ಸ್ವಾಮ್ಯದ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ನಿಗಮಗಳು/ ಸಂಸ್ಥೆಗಳು ತಮ್ಮ ಯೋಜನೆಗಳ ಅನುಷ್ಠಾನ ಮತ್ತು ಪ್ರಗತಿಯ ಬಗ್ಗೆ ವರದಿಗಳನ್ನು ಪ್ರಕಟಿಸುತ್ತಿರುವಾಗ ಕನ್ನಡ ಭಾಷೆಗೆ ಪ್ರಧಾನ ಆದ್ಯತೆಯನ್ನು ನೀಡಿ ಉಳಿದ ಇತರೆ ಭಾಷೆಗಳಲ್ಲಿ ಪ್ರಕಟಿಸುವ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು; | ರಾಜ್ಯದ ಅಧಿಕೃತ ಆಡಳಿತ ಭಾಷೆ ಕನ್ನಡವನ್ನು ಆಡಳಿತದ ಎಲ್ಲಾ ಹಂತಗಳಲ್ಲೂ ಪ್ರಧಾನವಾಗಿ ಬಳಸುವಂತಾಗಬೇಕು ಎಂಬುದು ಸರ್ಕಾರದ ಭಾಷಾ ನೀತಿ. ಈ ನೀತಿಯ ಅನುಷ್ಠಾನಕ್ಕೆಂದು ಕಾಲಕಾಲಕ್ಕೆ ಹಲವಾರು ಆದೇಶಗಳನ್ನು/ ಸುತ್ತೋಲೆಗಳನ್ನು ಹೊರಡಿಸಲಾಗಿರುತ್ತದೆ. ಇಲಾಖೆಗಳು, ನಿಗಮ, ಮಂಡಳಿಗಳು, ಪ್ರಾಧಿಕಾರಗಳು, ಸರ್ಕಾರದಿಂದ ಅನುದಾನ ಪಡೆಯುತ್ತಿರುವ ಎಲ್ಲಾ ಸಂಸ್ಥೆಗಳು ವಾರ್ಷಿಕ ಆಡಳಿತ ವರದಿಗಳು, ವಾರ್ಷಿಕ ವರದಿಗಳು, ಆಯವ್ಯಯ ದಾಖಲೆಗಳು ಮತ್ತು ಇತರೆ ಎಲ್ಲಾ ಅಗತ್ಯ ದಾಖಲಾತಿಗಳನ್ನು ಕಡ್ಡಾಯವಾಗಿ ಕನ್ನಡದಲ್ಲಿ ತಯಾರಿಸುವುದಕ್ಕೆ ಸಂಬಂಧಿಸಿ ದಂತೆಯೂ ಸಹ ಸದರಿ ಸುತ್ತೋಲೆಗಳನ್ನು ಸೂಚನೆ ಗಳನ್ನು ನಡಲಾಗಿರುತ್ತದೆ.<br><br>ರಾಜ್ಯ ಸರ್ಕಾರದ ಆಡಳಿತ ಭಾಷಾ ನೀತಿಯ ಅನುಷ್ಠಾನಕ್ಕಾಗಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವ್ಯಾಪ್ತಿಯಡಿ ಕನ್ನಡ ಅಭಿವೃದ್ಧಿ ಪ್ರಾಧಿಕಾರವನ್ನು ರಚಿಸಲಾಗಿದ್ದು, ಪ್ರಾಧಿಕಾರವು ಇಲಾಖೆಗಳು, ಸಾರ್ವಜನಿಕ ಉದ್ದಿಮೆಗಳು, ಸ್ಥಳೀಯ ನಿಕಾಯಗಳು ಮತ್ತು ರಾಜ್ಯ ಸರ್ಕಾರದಿಂದ ಅನುದಾನ ಪಡೆಯುತ್ತಿರುವ ಸಂಸ್ಥೆಗಳು ಕೈಗೊಂಡಿರುವ ಕ್ರಮಗಳನ್ನು ಪರಿಶೀಲಿಸುತ್ತದೆ. ಕನ್ನಡವನ್ನು ಆಡಳಿತ ಭಾಷೆಯನ್ನಾಗಿ ಜಾರಿಗೆ ತರುವಲ್ಲಿ ಇರುವ ಆಡಚಣೆಗಳನ್ನು ಗುರುತಿಸಿ ಅವುಗಳ ನಿವಾರಣೆಗೆ ಸೂಕ್ತ ಕ್ರಮಗಳನ್ನು ಕೈಗೊಳ್ಳುತ್ತಿದೆ. |
| ಆ) | ಮಾತೃಭಾಷೆಯಾದ ಕನ್ನಡದಲ್ಲಿ ಪ್ರಕಟಿಸುವುದು ಕಡ್ಡಾಯವಲ್ಲವೇ? ಕಡ್ಡಾಯವಾಗಿ ಕನ್ನಡ ಭಾಷೆಯನ್ನು ಬಳಸಲು ಸರ್ಕಾರವು ಕ್ರಮ ಕೈಗೊಳ್ಳಲು ಏನು ಕ್ರಮ ಕೈಗೊಂಡಿದೆ; | |

....2

| | | |
|---|---|---|
| ಇ) | ಈ ನಿಟ್ಟಿನಲ್ಲಿ ಕನ್ನಡ ಅಭಿವೃದ್ಧಿ ಪ್ರಾಧಿಕಾರ ಕೈಗೊಂಡ ಕ್ರಮಗಳೇನು; ಅಥವಾ ನಿರ್ವಹಿಸಿದ ಕರ್ತವ್ಯಗಳೇನು? | ಕನ್ನಡ ಅಭಿವೃದ್ಧಿ ಪ್ರಾಧಿಕಾರವು ಸರ್ಕಾರಿ ಸ್ವಾಮ್ಯದ ನಿಗಮಗಳು/ ಸಂಸ್ಥೆಗಳಲ್ಲಿ ಕನ್ನಡ ಭಾಷೆ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಇರುವ ಲೋಪಗಳ ಕುರಿತು ಸಂಬಂಧಪಟ್ಟವರಿಂದ ವರದಿ ಪಡೆಯುವ ಮತ್ತು ಕಚೇರಿಗಳಿಗೆ ಭೇಟಿ ನೀಡುವ ಮೂಲಕ ಪರಿಶೀಲನೆ ನಡೆಸಿ, ಸಂಬಂಧಪಟ್ಟವರಿಗೆ ಅಗತ್ಯ ಸೂಚನೆಗಳನ್ನು ನೀಡುತ್ತಿರುತ್ತದೆ. |

**ಸಂಖ್ಯೆ.ಕಸಂವಾ 165 ಕೆಎಲ್ಎಲ್ ಆಕ 2022**

(ವಿ.ಸುನಿಲ್ ಕುಮಾರ್)
ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು